**Publication: Sanje prabha**
**Date:20.08.2022**

ಶನಿವಾರ ೨೦ ಆಗಸ್ಟ್ ೨೦೨೨

ಸಂಜೆ ಪ್ರಭ

# ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಪರಿಸರ ಸಂರಕ್ಷಣೆಗೆ ಮುಂದಾಗಬೇಕು- ಥಾವರ್ ಚಂದ್ ಗೆಹ್ಲೋಟ್




ಸಂಜೆ ಪ್ರಭ ಬೆಂಗಳೂರು: ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಪರಿಸರ ಸಂರಕ್ಷಣೆಗೆ ಮುಂದಾಗಬೇಕು. ಆ ಮೂಲಕ ಜಾಗತಿಕ ತಾಪಮಾನ ಹಾಗೂ ಮಾಲಿನ್ಯ ನಿಯಂತ್ರಣಕ್ಕೆ ಕೈಜೋಡಿಸಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು.

ಮಹದೇವಪುರ ವಿಧಾನಸಭಾ ಕ್ಷೇತ್ರದ ಕುಂದಲಹಳ್ಳಿಯ ಸಿಎಂಆರ್ ಸಮೂಹ ಸಂಸ್ಥೆಯಲ್ಲಿ ಆಯೋಜಿಸಿದ "ಇಕೋ ಯುತ್" ಪ್ರಾರಂಭಕ್ಕೆ ಚಾಲನೆ ನೀಡಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪರಿಸರ ಸಂರಕ್ಷಣೆಯಲ್ಲಿ ಯುವಕರ ಪಾತ್ರ ಬಹುಮುಖ್ಯ. ಜಾಗತಿಕ ತಾಪಮಾನ, ವಾಯು ಮಾಲಿನ್ಯ, ಜಲ ಮಾಲಿನ್ಯ ಹಾಗೂ ಪರಿಸರ ಮಾಲಿನ್ಯ ನಿಯಂತ್ರಣಕ್ಕೆ ಪ್ರತಿಯೊಬ್ಬರೂ ಮುಂದಾಗುವ ಮೂಲಕ ಪರಿಸರ ಉಳಿಸಬೇಕು ಎಂದರು. ವಿದ್ಯಾಭ್ಯಾಸದ ನಂತರ ವಿದ್ಯಾರ್ಥಿಗಳು ಮುಂದಿನ ಜೀವನಕ್ಕಾಗಿ ಸ್ವಂತ ಕಂಪನಿಗಳು ಅಥವಾ ಕೆಲಸಗಳನ್ನು ಶುರು ಮಾಡುತ್ತಾರೆ. ಅದು ಪರಿಸರ ಪೂರ್ವಕವಾದ ಸಂಸ್ಥೆಯಾಗಿ, ಪ್ಲಾಸ್ಟಿಕ್ ಬಳಕೆ ಇಲ್ಲದೆ, ಪರಿಸರ ಸ್ನೇಹಿ ವಸ್ತುಗಳ ಉತ್ಪಾದನೆ ಹಾಗೂ ಬಳಕೆಯಾಗಬೇಕು. ರಾಷ್ಟ್ರ ಮಟ್ಟದಲ್ಲಿ ಪರಿಸರ ಸ್ನೇಹಿ ಉದ್ಯೋಗ ಸೃಷ್ಟಿ ಜೊತೆಗೆ ಪರಿಸರ ಸಂರಕ್ಷಣೆ ಮಾಡುವ ಜವಾಬ್ದಾರಿ ನಾವು ಹೊತ್ತಿದ್ದಂತೆ ಎಂದರು. ಕಾರ್ಯಕ್ರಮದಲ್ಲಿ ರಾಜ್ಯಸಭೆಯ ಮಾಜಿ ಸದಸ್ಯರು ಹಾಗೂ ಸಿಎಂಆರ್ ಸಮೂಹ ಸಂಸ್ಥೆಗಳ ಮುಖ್ಯಸ್ಥರಾದ ಕೆ.ಸಿ.ರಾಮಮೂರ್ತಿ, ಪರಿಸರವಾದಿ, ಸಂಗೀತ ನಿರ್ದೇಶಕ ರಿಕ್ಕಿ ಕೇಜ್, ಟ್ರಿಸ್ಟಾ ರಾಮಮೂರ್ತಿ, ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಭಾಗಿಯಾಗಿದ್ದರು.